# ಅಜಿತ್ ಕುಮಾರ್ ರೈ ಎನ್ಐಟಿಕೆ ಸುರತ್ಕಲ್‌ಗೆ ನಾಮನಿರ್ದೇಶನ



**ಮಂಗಳೂರು:** ಕರ್ನಾಟಕ ಸರಕಾರವು ರಾಜ್ಯದ ಪ್ರತಿಷ್ಠಿತ ಸಂಸ್ಥೆಯಾದ ಎನ್ಐಟಿಕೆ ಸುರತ್ಕಲ್‌ನ ಆಡಳಿತ ಮಂಡಳಿಗೆ ಉದ್ಯಮಿ ಮತ್ತು ಸುಪ್ರಜಿತ್ ಗ್ರೂಪ್‌ನ ಸಂಸ್ಥಾಪಕ ಮತ್ತು ಅಧ್ಯಕ್ಷ ಕೆ. ಅಜಿತ್ ಕುಮಾರ್ ರೈ ಅವರನ್ನು ರಾಜ್ಯ ಸರಕಾರದ ಪ್ರತಿನಿಧಿಯಾಗಿ ನಾಮನಿರ್ದೇಶನ ಮಾಡಿದೆ.

ಅಜಿತ್ ಕುಮಾರ್ ರೈ ಮೈಸೂರು ವಿಶ್ವವಿದ್ಯಾಲಯದಲ್ಲಿ ಮೆಕ್ಯಾನಿಕಲ್ ಎಂಜಿನಿಯರಿಂಗ್‌ನಲ್ಲಿ ಪದವಿ ಹಾಗೂ ಕೆನಡಾದ ಡಾಲ್‌ಹೌಸಿ ವಿಶ್ವವಿದ್ಯಾಲಯದಿಂದ ಕೈಗಾರಿಕಾ ಎಂಜಿನಿಯರಿಂಗ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಇವರ ನೇತೃತ್ವದ ಸುಪ್ರಜಿತ್ ಗ್ರೂಪ್ ಆಫ್ ಕಂಪನಿ ಆಟೋಮೋಟಿವ್ ಲೈಟಿಂಗ್, ಹ್ಯಾಲೊಜೆನ್ ಬಲ್ಬ್‌ಗಳು ಮತ್ತು ಕೇಬಲ್ ತಯಾರಕ ಮತ್ತು ದ್ವಿಚಕ್ರ ಕೇಬಲ್ ಮಾರುಕಟ್ಟೆಯಲ್ಲಿ ಜಾಗತಿಕ ನಾಯಕ ಸಂಸ್ಥೆಯಾಗಿದ್ದು, ಚೀನಾ, ಯುಎಸ್ಎ, ಮೆಕ್ಸಿಕೊ, ಇಂಗ್ಲೆಂಡ್, ಹಂಗೇರಿ, ಸ್ಲೋವೇನಿಯಾ, ಲುಕ್ಸೆಂಬರ್ಗ್, ಜರ್ಮನಿ ಸೇರಿದಂತೆ ನಾನಾ ದೇಶಗಳಲ್ಲಿ ವ್ಯವಹಾರ ಹೊಂದಿದೆ. ಕೈಗಾರಿಕೆ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಇವರು ಮುಂಬಯಿನಲ್ಲಿರುವ ಇಂಡಿಯನ್ ಇನ್‌ಸ್ಟಿಟ್ಯೂಟ್ ಮ್ಯಾನೇಜ್‌ಮೆಂಟ್‌ನ ಆಡಳಿತ ಮಂಡಳಿ, ಡಾಲ್‌ಹೌಸಿ ಸಲಹಾ ಸಮಿತಿ, ಅಮೆರಿಕನ್ ಇನ್‌ಸ್ಟಿಟ್ಯೂಟ್ ಆಫ್ ಇಂಡಸ್ಟ್ರಿಯಲ್ ಎಂಜಿನಿಯರ್ಸ್, ಕಾನ್ಫೆಡರೇಶನ್ ಆಫ್ ಇಂಡಿಯನ್ ಇಂಡಸ್ಟ್ರಿ ಆಟೋಮೋಟಿವ್ ಕಾಂಪೊನೆಂಟ್ ಮ್ಯಾನುಫ್ಯಾಕ್ಚರರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮುಂತಾದ ಕೈಗಾರಿಕಾ ಸಂಸ್ಥೆಗಳ ಆಡಳಿತ ಮಂಡಳಿ ಸದಸ್ಯರಾಗಿದ್ದಾರೆ.

ವಿದ್ಯಾರ್ಥಿ ವೇತನದ ಮೂಲಕ ಶಿಕ್ಷಣ ಮುಂದುವರಿಸಲು ವಿದ್ಯಾರ್ಥಿಗಳಿಗೆ ಹಣಕಾಸಿನ ನೆರವು, ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳ ಉನ್ನತೀಕರಣದಲ್ಲಿ ನೆರವು, ಸರಕಾರಿ ಪ್ರೌಢಶಾಲೆ(ಆರ್‌ಎಂಎಸ್ಎ) ವಿಟ್ಲ ಇದಕ್ಕೆ ಪೀಠೋಪಕರಣ ಸಹಿತ ಕಟ್ಟಡ ನಿರ್ಮಾಣ, ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬೆಂಬಲ, ವೈದ್ಯಕೀಯ ನೆರವು ಅಗತ್ಯವಿರುವವರಿಗೆ ಆರೈಕೆ ಹಾಗೂ ಚಿಕಿತ್ಸಾ ಸೇವೆಗಳನ್ನು ಒದಗಿಸುವ ಮೂಲಕ ಸಾಮಾಜಿಕ ಕಾಳಜಿಯನ್ನೂ ಹೊಂದಿದ್ದಾರೆ.

Vijaya karnataka, Date:08/11/23, p, no - 03